57

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

**ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ಇವರು ನಿಯಮ 330 ರಡಿ ಕೋರಿರುವ ಗಮನ ಸೆಳೆಯುವ ಸೂಚನೆಗೆ ಹೇಳಿಕೆ:**

**ಸೂಚನೆ:**

ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಸರ್ಕಾರದ ಆದೇಶಾನುಸಾರ ನೀಡುತ್ತಿರುವ ಸವಲತ್ತುಗಳನ್ನು ಪ್ರವರ್ಗ-1 ಕೆಳಗೆ ಬರುವ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೂ ಅನ್ವಯಿಸಿ ಜಾರಿಗೊಳಿಸುವ ಕುರಿತು.

**ಹೇಳಿಕೆ:**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ವಿದ್ಯಾರ್ಥಿನಿಲಯಗಳು ಮತ್ತು ವಿದ್ಯಾರ್ಥಿವೇತನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿರುತ್ತದೆ. ವಿದ್ಯಾರ್ಥಿವೇತನ ಕಾರ್ಯಕ್ರಮಗಳಡಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ ಹಾಗೂ ವಿದ್ಯಾಸಿರಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿರುತ್ತದೆ.

- ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮದಡಿಯಲ್ಲಿ ವಿದ್ಯಾರ್ಥಿವೇತನ ಮಂಜೂರು ಮಾಡಲು ಪ್ರವರ್ಗ-2ಎ, 3ಎ, 3ಬಿ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ರೂ.44500.00 ಲಕ್ಷಗಳ ಆದಾಯ ಮಿತಿಯನ್ನು ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸುವ ಸಲುವಾಗಿ ರೂ.1.00 ಲಕ್ಷದ ಆದಾಯಮಿತಿಯನ್ನು ನಿಗದಿಪಡಿಸಲಾಗಿದೆ. ಮೊದಲನೆ ಆಧ್ಯತೆಯಾಗಿ ಪ್ರವರ್ಗ-1ರ ಎಲ್ಲಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಿ, ನಂತರದಲ್ಲಿ ಉಳಿದ ಪ್ರವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುವುದು.

- ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿಯಲ್ಲಿ ವಿದ್ಯಾರ್ಥಿವೇತನ ಮಂಜೂರು ಮಾಡಲು ಪ್ರವರ್ಗ-2ಎ, 3ಎ, 3ಬಿ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷಗಳ ಆದಾಯಮಿತಿಯನ್ನು ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸುವ ಸಲುವಾಗಿ ರೂ.2.5 ಲಕ್ಷದ ಆದಾಯಮಿತಿಯನ್ನು ನಿಗದಿಪಡಿಸಲಾಗಿದೆ.

- ಶುಲ್ಕ ಮರು ಪಾವತಿ ಯೋಜನೆಯಡಿಯಲ್ಲಿ ಶುಲ್ಕ ಮರುಪಾವತಿ ಮಂಜೂರು ಮಾಡಲು ಪ್ರವರ್ಗ-2ಎ, 3ಎ, 3ಬಿ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷಗಳ ಆದಾಯಮಿತಿಯನ್ನು ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸುವ ಸಲುವಾಗಿ ರೂ.2.5 ಲಕ್ಷದ ಆದಾಯಮಿತಿಯನ್ನು ನಿಗದಿಪಡಿಸಲಾಗಿದೆ. ಶುಲ್ಕ ವಿನಾಯಿತಿ ಯೋಜನೆಯಡಿಯಲ್ಲಿ ಅರ್ಹರಿರುವ ಪ್ರವರ್ಗ-1ರ ಎಲ್ಲಾ ವಿದ್ಯಾರ್ಥಿಗಳಿಗೆ ಮೊದಲನೆಯ ಆದ್ಯತೆಯಲ್ಲಿ ಶುಲ್ಕ ಮರು ಪಾವತಿಯನ್ನು ಮಾಡಲಾಗುವುದು.

- ವಿದ್ಯಾಸಿರಿ ಯೋಜನೆಯಡಿಯಲ್ಲಿ ಸೌಲಭ್ಯ ಪಡೆಯಲು ಪ್ರವರ್ಗ-2ಎ, 3ಎ, 3ಬಿ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷಗಳ ಆದಾಯಮಿತಿಯನ್ನು ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸುವ ಸಲುವಾಗಿ ರೂ.2.5 ಲಕ್ಷದ ಆದಾಯಮಿತಿಯನ್ನು ನಿಗದಿಪಡಿಸಲಾಗಿದೆ.

...2

- ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಶೇ.10 ರಷ್ಟು ಮೀಸಲಾತಿಯನ್ನು ನಿಗಧಿಪಡಿಸಲಾಗಿರುತ್ತದೆ.

ಮುಂದುವರೆದು, ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಸೌಲಭ್ಯಗಳನ್ನು ಪ್ರವರ್ಗ-1 ರ ವಿದ್ಯಾರ್ಥಿಗಳಿಗೂ ಜಾರಿಗೊಳಿಸುವ ಬಗ್ಗೆ ಪರಿಶೀಲಿಸಲಾಗುವುದು.

**ಸಂಖ್ಯೆ:ಹಿಂವಕ 348 ಬಿಎಂಎಸ್ 2023**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.